ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಬೀದರ್ ನಗರಕ್ಕೆ ಮಂಜೂರಾಗಿರುವ ಇಂಜಿನಿಯರಿಂಗ್ ಕಾಲೇಜು ಕಟ್ಟಡ ಕಾಮಗಾರಿ ಪ್ರಗತಿ ಕುರಿತು

ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

620(667) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2017ರಲ್ಲಿ ಬೀದರ್ ನಗರಕ್ಕೆ ಇಂಜಿನಿಯರಿಂಗ್ ಕಾಲೇಜು ಮಂಜೂರಾಗಿದ್ದು, ಅದರ ಕಟ್ಟಡ ನಿರ್ಮಾಣದ ಕಾರ್ಯ ಪ್ರಗತಿಯಲ್ಲಿದ್ದು, ಅದು ಪ್ರಸ್ತುತ ಯಾವ ಹಂತದಲ್ಲಿದೆ; ಸದರಿ ಕಾಮಗಾರಿಯನ್ನು ಪೂರ್ಣಗೊಳಿಸಲು ನಿಗದಿಪಡಿಸಲಾದ ಕಾಲಮಿತಿಯೇನು; ಕಾಮಗಾರಿಗೆ ಬಿಡುಗಡೆಯಾದ ಅನುದಾನವೆಷ್ಟು; ಈ ಪೈಕಿ ಖರ್ಚು ಮಾಡಲಾದ ಹಣವೆಷ್ಟು;

(ಆ) ಸದರಿ ಕಾಲೇಜು ಮುಂದಿನ ಶೈಕ್ಷಣಿಕ ಸಾಲಿನಲ್ಲಿ ಆರಂಭಗೊಳ್ಳುವುದೆ; ಆರಂಭಗೊಳ್ಳದಿದ್ದಲ್ಲಿ, ಇದಕ್ಕೆ ಕಾರಣವೇನು; ಇದಕ್ಕೆ ಜವಾಬ್ದಾರರು; ಯಾವ ಕಾಲಮಿತಿಯೊಳಗೆ ಕಾಲೇಜು ಆರಂಭಗೊಳ್ಳುವುದು ?